# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆರಹಿತ ಪ್ರಶ್ನೆ ಸಂಖ್ಯೆ : **976(1188)**
ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 16.03.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಮೈಸೂರು ಹಾಗೂ ಬೆಂಗಳೂರು ವಿಭಾಗದ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರ್ಹ ಸಹ ಶಿಕ್ಷಕರಿಗೆ ಮುಖ್ಯ ಶಿಕ್ಷಕರ ಹುದ್ದೆಗೆ ಬಡ್ತಿ ನೀಡಲು ವಿಳಂಬ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ. | ವಿಳಂಬದಿಂದ ಅರ್ಹ ಸಹ ಶಿಕ್ಷಕರು ಬಡ್ತಿಯಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು, ಮೈಸೂರು ವಿಭಾಗಗಳಲ್ಲಿ ಹಾಲಿ ಚಾಲ್ತಿಯಲ್ಲಿದ್ದ ಪ್ರೌಢ ಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಎಲ್‌ಬಿಪಿ 2014, ದಿನಾಂಕ:20/05/2014ರಲ್ಲಿ ನೀಡಿರುವ ನಿರ್ದೇಶನಗಳಂತೆ, ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಹಾಗೂ ರೋಸ್ಟರ್ ಮೆರಿಟ್ ಆಧಾರದ ಮೇಲೆ, ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ಅಂತಿಮಗೊಳಿಸಬೇಕಾಯಿತು. ಈ ಕಾರಣದಿಂದ ಮುಂಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ.<br><br>ಬೆಂಗಳೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ದಿನಾಂಕ:06/02/2020ರಂದು ಪ್ರಕಟಿಸಲಾಗಿರುತ್ತದೆ. ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 312 ಖಾಲಿ ಇರುವ ಹುದ್ದೆಗಳಿಗೆ ಬಡ್ತಿ ನೀಡುವ ಸಂಬಂಧ ದಿನಾಂಕ:10/03/2020ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆಯ ಅನುಮೋದನೆಯಾಗಿರುತ್ತದೆ. ಸದರಿ ಸಮಿತಿಯ ನಿರ್ಣಯದಂತೆ, ಶೀಘ್ರವಾಗಿ ಮುಖ್ಯ ಶಿಕ್ಷಕರ ಖಾಲಿ ಹುದ್ದೆಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು.<br><br>ಮೈಸೂರು ವಿಭಾಗದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಅಂತಿಮವಾಗಿ ಆಕ್ಷೇಪಣೆಗಳು ಸ್ವೀಕೃತವಾಗಿರುವುದರಿಂದ, ಆಕ್ಷೇಪಣೆಗಳನ್ನು ಸರಿಪಡಿಸಿ, ಜ್ಯೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವೃಂದದ 410 ಖಾಲಿಯಿರುವ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು. |
| ಇ. | ಮುಖ್ಯ ಶಿಕ್ಷಕರ ಹುದ್ದೆಯ ಬಡ್ತಿ ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು). | |
| ಈ. | ಸದರಿ ಅರ್ಹ ಮುಖ್ಯ ಶಿಕ್ಷಕರಿಗೆ ಯಾವ ಕಾಲಮಿತಿಯಲ್ಲಿ ಬಡ್ತಿ ಸೌಲಭ್ಯ ನೀಡಲಾಗವುದು? | |

ಸಂಖ್ಯೆ: ಇಡಿ 37 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು